## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಹೊಸದುರ್ಗ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಗೆ ಸಂಬಂಧಿಸಿದಂತೆ ವಿವಿಧ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಅನುಮೋದನೆ ನೀಡುವ ಬಗ್ಗೆ.

**ಓದಲಾಗಿದೆ:**
1. ಆರ್ಥಿಕ ಇಲಾಖೆ ಅನಧಿಕೃತ ಟಿಪ್ಪಣಿ ಸಂಖ್ಯೆ:ಆಇ 482 ವೆಚ್ಚ-3/2022 ದಿನಾಂಕ:15.07.2022.
2. ಶ್ರೀ ಗೂಳಿಹಟ್ಟಿ ಡಿ. ಶೇಖರ್, ಮಾನ್ಯ ಶಾಸಕರು, ಹೊಸದುರ್ಗ ವಿಧಾನ ಸಭಾ ಕ್ಷೇತ್ರ ಇವರ ಪತ್ರ ದಿನಾಂಕ: 18.07.2022.

*****

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮಸಂಖ್ಯೆ(1)ರ ಆರ್ಥಿಕ ಇಲಾಖೆಯ ಅನಧಿಕೃತ ಟಿಪ್ಪಣಿಯಲ್ಲಿ ಹೊಸದುರ್ಗ ವಿಧಾನಸಭಾ ಮತ ಕ್ಷೇತ್ರ ವ್ಯಾಪ್ತಿಯಲ್ಲಿ ಹಿಂದುಳಿದ ವರ್ಗಗಳ ಅನುಕೂಲಕ್ಕಾಗಿ ಸಮುದಾಯ ಭವನ ನಿರ್ಮಾಣಕ್ಕಾಗಿ ರೂ.3.00ಕೋಟಿ ಮಂಜೂರು ಮಾಡುವಂತೆ ಮಾನ್ಯ ಮುಖ್ಯಮಂತ್ರಿಯವರು ಆದೇಶಿಸಿರುತ್ತಾರೆ. ಈ ಹಿನ್ನೆಲೆಯಲ್ಲಿ 2021-22ನೇ ಸಾಲಿನ ಪೂರಕ ಅಂದಾಜು-3ರಲ್ಲಿ ವಿವಿಧ ಸಮುದಾಯಗಳ ಅಭಿವೃದ್ಧಿ ಕಾರ್ಯಕ್ರಮದಡಿ ಬಿಡುಗಡೆಯಾಗಿ ವರ್ಷಾಂತ್ಯಕ್ಕೆ ಬಾಕಿ ಉಳಿದು ಪ್ರಸ್ತುತ ಬ್ಯಾಂಕ್ ಖಾತೆಯಲ್ಲಿ ಲಭ್ಯವಿರುವ ಅನುದಾನದಿಂದ ಮಾನ್ಯ ಮುಖ್ಯಮಂತ್ರಿಗಳು ಆದೇಶಿಸಿರುವಂತೆ ರೂ.3.00ಕೋಟಿ ಬಿಡುಗಡೆಗೊಳಿಸುವಂತೆ ತಿಳಿಸಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಮಾನ್ಯ ಶಾಸಕರ ಪತ್ರದಲ್ಲಿ ಮಾನ್ಯ ಶಾಸಕರು, ಹೊಸದುರ್ಗ ವಿಧಾನಸಭಾ ಕ್ಷೇತ್ರ ಇವರು ನನ್ನ ಮತ ಕ್ಷೇತ್ರದ ವ್ಯಾಪ್ತಿಯಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ ವಿವಿಧ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು 2022-23ನೇ ಸಾಲಿನಲ್ಲಿ ರೂ.300.00 ಲಕ್ಷಗಳ ಅನುದಾನವನ್ನು ಬಿಡುಗಡೆ ಮಾಡಲು ಮಾನ್ಯ ಮುಖ್ಯಮಂತ್ರಿಯವರು ಅನುಮೋದನೆ ನೀಡಿದ್ದು, ಅದರಂತೆ ಕಾಮಗಾರಿಗಳಿಗೆ ಅನುದಾನ ಮಂಜೂರು ಮಾಡಲು ಕೋರಿರುತ್ತಾರೆ.

ಮೇಲ್ಕಂಡ ಅಂಶಗಳನ್ನು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಹಿಂವಕ 429 ಬಿಎಂಎಸ್ 2022**
**ಬೆಂಗಳೂರು, ದಿನಾಂಕ:12.08.2022**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಹೊಸದುರ್ಗ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿನ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಗೆ ಸಂಬಂಧಿಸಿದಂತೆ ಈ ಕೆಳಕಂಡ ಸಂಘ ಸಂಸ್ಥೆಗಳಿಗೆ ರೂ.300.00 ಲಕ್ಷ (ಮುನ್ನೂರು ಲಕ್ಷ ರೂಪಾಯಿಗಳು ಮಾತ್ರ)ಗಳ

...2

12/8/22

ಅನುದಾನದಲ್ಲಿ ವಿವಿಧ ಅಭಿವೃದ್ಧಿ ಕಾರ್ಯಕ್ರಮ ಮತ್ತು ಕಟ್ಟಡ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲು ಕೆಳಕಂಡ ಷರತ್ತುಗಳಿಗೊಳಪಟ್ಟು ಅನುಮತಿ ನೀಡಿ ಆದೇಶಿಸಿದೆ.

| ಕ್ರ.ಸಂ. | ಕಾಮಗಾರಿಗಳ ವಿವರ | ಅಂದಾಜು ಮೊತ್ತ (ರೂ.ಲಕ್ಷಗಳಲ್ಲಿ) |
|---|---|---|
| 1 | ಹೊಸದುರ್ಗ ತಾಲ್ಲೂಕು ಹೊಸದುರ್ಗ ನಗರದಲ್ಲಿ ಶಿವನಕಟ್ಟೆ ಸರ್ವೆ ನಂ-32 ರಲ್ಲಿನ ಸರ್ಕಾರಿ ಜಾಗದಲ್ಲಿ ಸಮುದಾಯ ಭವನ ನಿರ್ಮಾಣ (ಶಿಕ್ಷಕರ ಸಮುದಾಯ ಭವನ) ನಿರ್ಮಾಣಕ್ಕೆ | 200.00 |
| 2 | ಹೊಸದುರ್ಗ ತಾಲ್ಲೂಕು ಮೆಂಗಸಂದ್ರ ಗೊಲ್ಲರಹಟ್ಟಿಯಲ್ಲಿ ಮಹಿಳಾ ಸಮುದಾಯ ಭವನ ನಿರ್ಮಾಣಕ್ಕೆ | 35.00 |
| 3 | ಹೊಸದುರ್ಗ ತಾಲ್ಲೂಕು ಅಂಚಿಬಾರಿಹಟ್ಟಿಯಲ್ಲಿ ಸಮುದಾಯ ಭವನ ನಿರ್ಮಾಣಕ್ಕೆ | 30.00 |
| 4 | ಹೊಸದುರ್ಗ ತಾಲ್ಲೂಕು ನಾಗಯ್ಯನಹಟ್ಟಿಯಲ್ಲಿ ಸಮುದಾಯ ಭವನ ನಿರ್ಮಾಣಕ್ಕೆ | 35.00 |
| | **ಒಟ್ಟು** | **300.00** |

**ಷರತ್ತುಗಳು:**

1. ಸಹಮತಿಸಲಾದ ಅನುದಾನದ ಮಿತಿಯಲ್ಲಿಯೇ ಕಾಮಗಾರಿಗಳ ಅಂದಾಜನ್ನು ಪ್ರಚಲಿತ ದರಪಟ್ಟಿಯನ್ವಯ ತಯಾರಿಸತಕ್ಕದ್ದು. ಅಂತಹ ಅಂದಾಜಿನಲ್ಲಿ ಸಹಮತಿಸಿದ ಅನುದಾನ ಮಿತಿಯಲ್ಲಿಯೇ ಟೆಂಡರ್ ಪ್ರೀಮಿಯಂ ಕೂಡ ಒಳಗೊಂಡಿರತಕ್ಕದ್ದು, ಯಾವುದೇ ಕಾರಣಕ್ಕೂ ಅಂದಾಜಿನಲ್ಲಿ ನಿರ್ಣಾಯಕ ಐಟಂಗಳು ಕೈಬಿಡದಂತೆ ನೋಡಿಕೊಳ್ಳತಕ್ಕದ್ದು.
2. ಪ್ರಸ್ತಾಪಿಸಿದ ಕಾಮಗಾರಿಗಳಡಿ ಅಂದಾಜನ್ನು ಪರಿಷ್ಕರಿಸುವುದನ್ನು ನಿರ್ಬಂಧಿಸಿದೆ.
3. ಆಡಳಿತಾತ್ಮಕ ಅನುಮೋದನೆಯನ್ನು 15 ದಿನಗಳೊಳಗಾಗಿ ನೀಡತಕ್ಕದ್ದು.
4. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ರವರು ಸರ್ಕಾರದ ಆದೇಶ ಸಂಖ್ಯೆ: ಹಿಂವಕ 695 ಬಿಎಂಎಸ್ 2014 (ಭಾ-2) ದಿನಾಂಕ:05.11.2014 ಹಾಗೂ ಸರ್ಕಾರದ ಆದೇಶ ಸಂಖ್ಯೆ: ಹಿಂವಕ 1133 ಬಿಎಂಎಸ್ 2017, ದಿನಾಂಕ: 29.11.2017ರ ಮಾರ್ಗಸೂಚಿಗಳನ್ನು ತಪ್ಪದೆ ಪಾಲಿಸತಕ್ಕದ್ದು, ಈ ಯೋಜನೆಯ ಮಾರ್ಗಸೂಚಿಗಳ ಪ್ರಕಾರ ನಿಯಮಾನುಸಾರ ಅಗತ್ಯವಾದ ಎಲ್ಲಾ ದಾಖಲೆಗಳನ್ನು ಪಡೆದು, ಪರಿಶೀಲಿಸಿ ಅನುದಾನವನ್ನು ಪಡೆಯಲು ಅರ್ಹತೆ ಇದ್ದಲ್ಲಿ ಮಾತ್ರ ಈ ಸಂಸ್ಥೆಗೆ ನಿಯಮಾನುಸಾರ ಹಾಗೂ ಅರ್ಹತೆಯನುಸಾರ ಅನುದಾನವನ್ನು ಮಾರ್ಗಸೂಚಿಗಳಂತೆ ಹಂತಹಂತವಾಗಿ ಬಿಡುಗಡೆ ಮಾಡತಕ್ಕದ್ದು.
5. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು ಇವರು ಅನುದಾನವನ್ನು ಕಟ್ಟಡ ಪ್ರಗತಿಗನುಗುಣವಾಗಿ ಹಂತ ಹಂತವಾಗಿ ಬಿಡುಗಡೆ ಮಾಡುವಂತೆ ಹಾಗೂ ಬಿಡುಗಡೆ ಮಾಡಿದ ಮೊತ್ತಕ್ಕೆ ಹಣ ಬಳಕೆ ಪ್ರಮಾಣ ಪತ್ರವನ್ನು ನಿಯಮಾನುಸಾರ ಜಿಲ್ಲಾಧಿಕಾರಿಗಳು, ಚಿತ್ರದುರ್ಗ ಜಿಲ್ಲೆ ಇವರ ಮುಖಾಂತರ ಪಡೆಯತಕ್ಕದ್ದು.

12/8/22

..3